# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1068 |
| ಉತ್ತರಿಸಬೇಕಾದ ದಿನಾಂಕ | : | 23.02.2024 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | : | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲಾ ಕ್ರೀಡಾಂಗಣದಲ್ಲಿ ಯಾವ ಯಾವ ಕ್ರೀಡೆಗಳನ್ನು ಆಯೋಜಿಸಲಾಗಿತ್ತು;<br><br>ಕ್ರೀಡಾಪಟುಗಳ ಉತ್ತೇಜನಕ್ಕಾಗಿ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು) | ವಿಜಯಪುರ ಜಿಲ್ಲಾ ಕ್ರೀಡಾಂಗಣದಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ವಿಕಲಚೇತನರ ಕ್ರೀಡಾಕೂಟ ಹಾಗೂ ದಸರಾ ಕ್ರೀಡಾ ಕೂಟಗಳನ್ನು ಆಯೋಜಿಸಲಾಗಿತ್ತು.<br>• ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ದಿನಾಂಕ: 12-09-2023<br>• ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟ ದಿನಾಂಕ: 30-09-2023.<br>• ತಾಲ್ಲೂಕು ಮಟ್ಟದ ವಿಕಲಚೇತನರ ಕ್ರೀಡಾಕೂಟ ದಿನಾಂಕ: 21-11-2023<br>• ಜಿಲ್ಲಾ ಮಟ್ಟದ ವಿಕಲಚೇತನರ ಕ್ರೀಡಾಕೂಟ ದಿನಾಂಕ: 27-11-2023.<br><br>ಕ್ರೀಡಾಪಟುಗಳ ಉತ್ತೇಜನಕ್ಕಾಗಿ ಅಂತರರಾಷ್ಟ್ರೀಯ ಮಟ್ಟದ 400ಮೀ. ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್, ಫುಟ್ಬಾಲ್, ವಾಲಿಬಾಲ್, ಸ್ಕೇಟಿಂಗ್, ಬಾಸ್ಕೆಟ್‌ಬಾಲ್, ಟೇಬಲ್ ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್ ಅಂಕಣಗಳನ್ನು ನಿರ್ಮಿಸಲಾಗಿದ್ದು, ಸಂಬಂಧಿಸಿದ ಕ್ರೀಡೆಯ ಕ್ರೀಡಾಪಟುಗಳಿಗೆ ದೈನಂದಿನ ತರಬೇತಿ ನೀಡಲಾಗುತ್ತಿದೆ. |
| ಆ) | ಸದರಿ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕು ಕ್ರೀಡಾಂಗಣಗಳಿವೆ; | ವಿಜಯಪುರ ಜಿಲ್ಲೆಯ ಇಂಡಿ ಮತ್ತು ಸಿಂದಗಿ ತಾಲ್ಲೂಕುಗಳಲ್ಲಿ ತಾಲ್ಲೂಕು ಕ್ರೀಡಾಂಗಣಗಳಿವೆ.<br><br>2021-22ನೇ ಸಾಲಿನಲ್ಲಿ ಮುದ್ದೇಬಿಹಾಳ್ ತಾಲ್ಲೂಕು ಕ್ರೀಡಾಂಗಣದಲ್ಲಿ 400ಮೀ ಅಥ್ಲೆಟಿಕ್ ಮಡ್ ಟ್ರ್ಯಾಕ್, 2 ವಾಲಿಬಾಲ್, 2 ಖೋ-ಖೋ, ಫುಟ್ಬಾಲ್, ಕಬಡ್ಡಿ ಮೈದಾನ ಹಾಗೂ ಲಾಂಗ್ ಜಂಪ್ ಪಿಟ್ ನಿರ್ಮಿಸಲು, ದಾಸ್ತಾನು ಕೊಠಡಿ ನಿರ್ಮಾಣ, ಆರ್.ಸಿ.ಸಿ. ಚರಂಡಿ, ಗೇಟ್ ನಿರ್ಮಾಣ, ಧ್ವಜಸ್ತಂಭ ನಿರ್ಮಾಣ, ಬೋರ್‌ವೆಲ್ ಕೊರೆಯುವುದು, ವಿದ್ಯುತ್ ಸಂಪರ್ಕ ಕಲ್ಪಿಸುವುದು ಹಾಗೂ ಶೌಚಾಲಯ ನಿರ್ಮಾಣ ಕಾಮಗಾರಿಗಳನ್ನು ರೂ 85.50 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನಲ್ಲಿ ರೂ 70.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br><br>ಅಲ್ಲದೇ, 2022-23ನೇ ಸಾಲಿನಲ್ಲಿ ಮುದ್ದೇಬಿಹಾಳ್ ತಾಲ್ಲೂಕು ಕ್ರೀಡಾಂಗಣದ ಸುತ್ತಲೂ ತಂತಿ ಬೇಲಿ ನಿರ್ಮಿಸುವುದು |

| | | |
|---|---|---|
| | | ಹಾಗೂ ಪೆವಿಲಿಯನ್ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ರೂ 200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನಲ್ಲಿ ರೂ 100.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.<br><br>ಬಸವನ ಬಾಗೇವಾಡಿ, ನಿಡಗುಂದಿ, ಬಬಲೇಶ್ವರ ತಾಲ್ಲೂಕುಗಳಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ನಿವೇಶನ ಗುರುತಿಸಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸಿಕೊಳ್ಳಲಾಗಿದೆ. |
| | ತಾಲ್ಲೂಕು ಕ್ರೀಡಾಂಗಣ ಇಲ್ಲದಿರುವ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸದರಿ ತಾಲ್ಲೂಕು ಕೇಂದ್ರಗಳಲ್ಲಿ ಸುಸಜ್ಜಿತ ತಾಲ್ಲೂಕು ಕ್ರೀಡಾಂಗಣವನ್ನು ಸಾರ್ವಜನಿಕ – ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ನಿರ್ಮಾಣ ಮಾಡಲು ವಹಿವಾಟು ಸಲಹೆಗಾರರಾಗಿ (Transaction Advisor) ಮೇ॥ ಐಡೆಕ್, ಬೆಂಗಳೂರು ಸಂಸ್ಥೆಯನ್ನು ನೇಮಕ ಮಾಡಿಕೊಳ್ಳಲಾಗಿರುತ್ತದೆ. ಸದರಿ ಸಂಸ್ಥೆಯು ಉದ್ದೇಶಿತ ತಾಲ್ಲೂಕು ಕ್ರೀಡಾಂಗಣದ ನಿವೇಶನದ ಸ್ಥಳ ಅಧ್ಯಯನ ಮಾಡಿ, ಕಾರ್ಯಸಾಧ್ಯತಾ ವರದಿಯನ್ನು ನೀಡಿದೆ. ಸದರಿ ವರದಿಯು ಪ್ರಸ್ತುತ ಇಲಾಖೆಯ ಪರಿಶೀಲನೆಯಲ್ಲಿದೆ.<br><br>ತಿಕೋಟ, ದೇವರಹಿಪ್ಪರಗಿ, ಆಲಮೇಲ, ಚಡಚಣ, ಕೋಲ್ಹಾರ್, ತಾಳಿಕೋಟೆ ತಾಲ್ಲೂಕು ಕೇಂದ್ರಗಳಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ಸೂಕ್ತ ನಿವೇಶನವನ್ನು ಗುರುತಿಸಲು ಕ್ರಮವಹಿಸಲಾಗಿದೆ. |
| ಇ) | ಗ್ರಾಮೀಣ ಭಾಗದ ಮಕ್ಕಳ ಕ್ರೀಡೆಯನ್ನು ಉತ್ತೇಜಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಗ್ರಾಮೀಣ ಭಾಗದ ಮಕ್ಕಳ ಕ್ರೀಡೆಯನ್ನು ಉತ್ತೇಜಿಸಲು ಸರ್ಕಾರ ಕೆಳಕಾಣಿಸಿದ ಕ್ರಮಗಳನ್ನು ಕೈಗೊಂಡಿದೆ.<br><br>1. ಗ್ರಾಮೀಣ ಕ್ರೀಡೆಯಾದ ಕುಸ್ತಿ ಕ್ರೀಡೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ '**ಕರ್ನಾಟಕ ಕುಸ್ತಿ ಹಬ್ಬ**'ವನ್ನು ಆಯೋಜಿಸಲಾಗುತ್ತಿದೆ. ಅಲ್ಲದೇ, ಆಧುನಿಕ ಕುಸ್ತಿ ಮ್ಯಾಟ್‌ಗಳನ್ನು ಒದಗಿಸಲಾಗುತ್ತಿದೆ.<br>2. ಜಿಲ್ಲೆಗಳಲ್ಲಿ ಕಬಡ್ಡಿ ಕ್ರೀಡೆಗೆ ಉತ್ತೇಜನ ನೀಡಲು ಆಧುನಿಕ ಕಬಡ್ಡಿ ಮ್ಯಾಟ್‌ಗಳನ್ನು ಒದಗಿಸಲಾಗಿದೆ.<br>3. ಗ್ರಾಮೀಣ ಕ್ರೀಡೆಗಳಲ್ಲಿನ ಸಾಧಕರನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ '**ಕರ್ನಾಟಕ ಕ್ರೀಡಾ ರತ್ನ**' ಪ್ರಶಸ್ತಿಯನ್ನು ಪ್ರತಿಭಾವಂತ ಕ್ರೀಡಾಪಟುಗಳಿಗೆ ಪ್ರತಿ ವರ್ಷ ನೀಡಿ ಗೌರವಿಸಲಾಗುತ್ತಿದೆ.<br>4. ಬೆಳಗಾವಿ, ದಾವಣಗೆರೆ, ಹಳಿಯಾಳ, ಗದಗ, ಧಾರವಾಡ ಜಿಲ್ಲೆಗಳ ಕ್ರೀಡಾ ವಸತಿ ನಿಲಯಗಳಲ್ಲಿ ಕುಸ್ತಿ ಕ್ರೀಡಾ ವಿಭಾಗದಲ್ಲಿ ಯುವ ಕುಸ್ತಿಪಟುಗಳಿಗೆ ಪ್ರವೇಶ ನೀಡಿ, ವೈಜ್ಞಾನಿಕ ತರಬೇತಿ ನೀಡಲಾಗುತ್ತಿದೆ. ಮಂಡ್ಯ ಮತ್ತು ದಾವಣಗೆರೆ ಕ್ರೀಡಾ ವಸತಿ |

| | | |
|---|---|---|
| | | ನಿಲಯಗಳಲ್ಲಿ ಕಬಡ್ಡಿ ಕ್ರೀಡೆಯಲ್ಲಿ ತರಬೇತಿ ನೀಡಲಾಗುತ್ತಿದೆ.<br>5. ಪ್ರತಿ ವರ್ಷ ದಸರಾ ಮಹೋತ್ಸವದ ಸಂದರ್ಭದಲ್ಲಿ ಕಬಡ್ಡಿ, ಖೋ-ಖೋ, ಕುಸ್ತಿ ಸೇರಿದಂತೆ ವಿವಿಧ ಕ್ರೀಡೆಗಳಲ್ಲಿ ರಾಜ್ಯ ಮಟ್ಟದ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ.<br>6. ಪ್ರತಿ ವರ್ಷ ಗ್ರಾಮೀಣ ಗರಡಿ ಮನೆಗಳನ್ನು ನಿರ್ಮಿಸಲಾಗುತ್ತಿದೆ.<br>7. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಗ್ರಾಮೀಣ ಕ್ರೀಡಾ ಅಂಕಣಗಳನ್ನು ನಿರ್ಮಿಸಲಾಗಿದೆ. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/27/2024**

**( ಬಿ. ನಾಗೇಂದ್ರ )**
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.